ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1239
ಸದಸ್ಯರ ಹೆಸರು	ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	17.03.2020.
ಉತ್ತರಿಸುವ ಸಚಿವರು	ಗಣಿ ಮತ್ತು ಭೂವಿಜ್ಞಾನ ಸಚಿವರು

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಮಂಡ್ಯ ಜಿಲ್ಲೆಯಲ್ಲಿ ಕಲ್ಲು ಗಣಿಗಾರಿಕೆ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಕಟ್ಟಡ ಕಲ್ಲು ಗಣಿಗಾರಿಕೆ ನಡೆಸಲು 122 ಕಲ್ಲುಗಣಿ ಗುತ್ತಿಗೆಗಳನ್ನು, 250 ಎಕರೆ-17ಗುಂಟೆ ಪ್ರದೇಶದಲ್ಲಿ ಮಂಜೂರು ಮಾಡಲಾಗಿರುತ್ತದೆ. ಈ ಪೈಕಿ 98 ಕಲ್ಲುಗಣಿ ಗುತ್ತಿಗೆ 201ಎಕರೆ-05ಗುಂಟೆ ಪ್ರದೇಶದಲ್ಲಿ ಗಣಿ ಕಾರ್ಯ ನಿರ್ವಹಿಸುತ್ತಿದ್ದು, 25 ಕಲ್ಲುಗಣಿ ಗುತ್ತಿಗೆಗಳು ಸ್ಥಗಿತಗೊಂಡಿರುತ್ತವೆ.</td></tr>
<tr><td>ಆ)</td><td>ಇದರಿಂದ ಸರ್ಕಾರಿ ಕಟ್ಟಡ ನಿರ್ಮಾಣ, ಸಾರ್ವಜನಿಕರ ಮನೆ ನಿರ್ಮಾಣ ಕಾಮಗಾರಿಗಳಿಗೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಮಂಡ್ಯ ಜಿಲ್ಲೆ ವಾಪ್ತಿಯಲ್ಲಿ ಕಳೆದ 02 ವರ್ಷಗಳಿಂದ ಕಲ್ಲುಗಣಿ ಗುತ್ತಿಗೆ ಪ್ರದೇಶದಲ್ಲಿ ಉತ್ಪಾದಿಸಿ ಸಾಗಾಣಿಕೆ ಮಾಡಿದ ಕಟ್ಟಡ ಕಲ್ಲಿನ ವಿವರ ಕೆಳಕಂಡಂತಿದೆ:
<table>
<tr><th>ಕ್ರ ಸಂ.</th><th>ವರ್ಷ</th><th>ಸಾಗಾಣಿಕೆ ಮಾಡಿದ ಕಟ್ಟಡ ಕಲ್ಲಿನ ಪ್ರಮಾಣ (ಮೆಟ್ರಿಕ್ ಟನ್‌ಗಳಲ್ಲಿ)</th></tr>
<tr><td>1</td><td>2017-18</td><td>311852</td></tr>
<tr><td>2</td><td>2018-19</td><td>372077</td></tr>
</table>

ಅಧಿಕೃತ ಕಲ್ಲುಗಣಿ ಗುತ್ತಿಗೆಗಳು ಮತ್ತು ಕ್ರಷರ್‌ಗಳಿಂದ ಸಾಕಷ್ಟು ಪ್ರಮಾಣದಲ್ಲಿ ಕಟ್ಟಡ ಸಾಮಾಗ್ರಿಗಳು ದೊರೆಯುತ್ತಿದ್ದು, ಜಿಲ್ಲೆಯ ಎಲ್ಲಾ 7 ತಾಲ್ಲೂಕುಗಳಿಂದ ನಗರ ಪ್ರದೇಶಗಳಿಗೆ ಕಟ್ಟಡ ಕಲ್ಲು ದೊರೆಯದೇ ಇರುವ ಬಗ್ಗೆ ಯಾವುದೇ ದೂರುಗಳು ಬಂದಿರುವುದಿಲ್ಲ.

ಅನಧಿಕೃತ ಗಣಿಗಾರಿಕೆಗಳಿಂದ ವಶಪಡಿಸಿಕೊಂಡಿರುವ ಮರಳು, ಜಲ್ಲಿ ಮತ್ತು ಎಂ-ಸ್ಯಾಂಡ್ ದಾಸ್ತಾನು ಸಾಕಷ್ಟು ಪ್ರಮಾಣದಲ್ಲಿ ಇಲಾಖೆಯ ವಶದಲ್ಲಿದ್ದು, ಮುಂದಿನ ದಿನಗಳಲ್ಲಿ ತೊಂದರೆ ಉಂಟಾದಲ್ಲಿ ಸರ್ಕಾರಿ ಮತ್ತು ಸಾರ್ವಜನಿಕ ನಿರ್ಮಾಣ ಕಾರ್ಯಗಳಿಗೆ ನೀಡಲಾಗುವುದು.</td></tr>
</table>

--2

ಇ)	ಸರ್ಕಾರದ ಎಲ್ಲಾ ಷರತ್ತುಗಳನ್ನು ಪೂರೈಸಿ. ನ್ಯಾಯಾಲಯದ ಆದೇಶ ಪಡೆದಿರುವ ಗಣಿಗಾರಿಕೆಗಳನ್ನು ಪ್ರಾರಂಭಿಸಲು ಸರ್ಕಾರ ಪುನರ್ ಪರಿಶೀಲಿಸುವುದೇ;	ಮಂಡ್ಯ ಜಿಲ್ಲೆಯ ಕೆಲವು ಕಲ್ಲುಗಣಿ ಗುತ್ತಿಗೆಗಳು ಮತ್ತು ಕ್ರಷರ್‌ಗಳು ಅಧಿಕೃತವಾಗಿ ಪರವಾನಗಿ ಪಡೆದು ಕಾರ್ಯ ನಿರ್ವಹಿಸುತ್ತಿದ್ದರೂ ಸಹ ಕಲ್ಲುಗಣಿ ಗುತ್ತಿಗೆ ಪ್ರದೇಶದಲ್ಲಿ ಸಂಚಿತ ಆಡಿಟ್ ಪ್ರಮಾಣಕ್ಕಿಂತ ಅಧಿಕವಾಗಿ ಉಪಖನಿಜ ಉತ್ಪಾದಿಸಿ ಸಾಗಾಣಿಕೆ ಮಾಡಿರುವುದು ಕಂಡುಬಂದ ಹಿನ್ನೆಲೆಯಲ್ಲಿ ಸದರಿ ಪ್ರಮಾಣಕ್ಕೆ ರಾಜಧನದ 05 ಪಟ್ಟು ದಂಡವನ್ನು ವಿಧಿಸಲಾಗಿರುತ್ತದೆ. ಸದರಿ ಮೊತ್ತವನ್ನು ಪಾವತಿಸುವಂತೆ, ಗುತ್ತಿಗೆದಾರರಿಗೆ ಸೂಚಿಸಿ ನೋಟೀಸ್ ಜಾರಿ ಮಾಡಿದ್ದು, ತಾತ್ಕಾಲಿಕವಾಗಿ ಕಲ್ಲುಗಣಿ ಗುತ್ತಿಗೆಗಳ ಕಾರ್ಯವನ್ನು ಸ್ಥಗಿತಗೊಳಿಸಲಾಗಿದೆ. ದಂಡ ಪಾವತಿಸುವಂತೆ ನೀಡಿರುವ ನೋಟೀಸ್‌ನ್ನು ಪ್ರಶ್ನಿಸಿ ಗುತ್ತಿಗೆದಾರರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್‌ಗಳನ್ನು ದಾಖಲಿಸಿದ್ದು, ಮಾನ್ಯ ನ್ಯಾಯಾಲಯದ ಆದೇಶದನ್ವಯ ಸೂಕ್ತ ಕ್ರಮ ಜರುಗಿಸಲಾಗುತ್ತಿದೆ.
ಈ)	ನಿಯಮಾನುಸಾರ ಎಲ್ಲಾ ಷರತ್ತುಗಳನ್ನು ಪೂರೈಸಿರುವ ಗಣಿಗಾರಿಕೆಗಳಿಗೆ ಯಾವ ಕಾಲಮಿತಿಯಲ್ಲಿ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು?	ಅಧಿಕೃತವಾಗಿ ಪರವಾನಿಗೆ ಪಡೆದು ಗುತ್ತಿಗೆ ಕರಾರಿನ ಷರತ್ತು ಮತ್ತು ನಿಬಂಧನೆಗಳನ್ನು ಪಾಲನೆ ಮಾಡಿ, ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದಿರುವ ಕಲ್ಲುಗಣಿ ಗುತ್ತಿಗೆ ಪ್ರದೇಶಗಳಲ್ಲಿ ಗಣಿ ಕಾರ್ಯ ನಡೆಯುತ್ತಿರುತ್ತದೆ. ಕೆಲವು ಕಲ್ಲುಗಣಿ ಗುತ್ತಿಗೆಗಳು ಮತ್ತು ಕ್ರಷರ್ ಘಟಕಗಳು ನಿಯಮ ಉಲ್ಲಂಘಿಸಿ ಕಾರ್ಯಾಚರಣೆ ನಡೆಸುತ್ತಿರುವ ಸಂಬಂಧ ಸಾರ್ವಜನಿಕರಿಂದ ದೂರು ಬಂದ ಹಿನ್ನೆಲೆಯಲ್ಲಿ ಪರಿಶೀಲನೆ ನಡೆಸಿ ನಿಯಮ ಉಲ್ಲಂಘಿಸಿರುವ ಕಲ್ಲು ಗಣಿ / ಕ್ರಷರ್‌ಗಳ ಪರವಾನಿಗೆದಾರರು ಲೋಪದೋಷಗಳನ್ನು ಸರಿಪಡಿಸಿಕೊಳ್ಳುವಂತೆ ಸೂಚಿಸಿ ತಾತ್ಕಾಲಿಕವಾಗಿ ಗಣಿ ಕಾರ್ಯವನ್ನು ಸ್ಥಗಿತಗೊಳಿಸಲಾಗಿದೆ. ಗುತ್ತಿಗೆದಾರರು ಲೋಪದೋಷಗಳನ್ನು ಸರಿಪಡಿಸಿಕೊಂಡು ವರದಿ ಸಲ್ಲಿಸಿದ ನಂತರ ಪರಿಶೀಲಿಸಿ ಕಲ್ಲುಗಣಿ / ಕ್ರಷರ್ ಘಟಕಗಳ ಕಾರ್ಯಾಚರಣೆಗೆ ಕ್ರಮ ವಹಿಸಲಾಗುವುದು.

ಸಂಖ್ಯೆ: ಸಿಐ 152 ಎಂಎಂಎಸ್ 2020

(ಸಿ.ಸಿ. ಪಾಟೀಲ)
ಗಣಿ ಮತ್ತು ಭೂವಿಜ್ಞಾನ ಸಚಿವರು